ಕರ್ನಾಟಕ ಸರ್ಕಾರ

*ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.*

ಸಂಖ್ಯೆ:ಪಪೂಶಿಇ/ ಶೈ.ಶಾ-04/ ವಿ.ದಾ.ಕು-02/2015-16 ದಿನಾಂಕ: 15-07-2015

## ಸುತ್ತೋಲೆ

ವಿಷಯ: ಪ್ರಥಮ ಪಿಯುಸಿ ದಾಖಲಾತಿ ದಿನಾಂಕವನ್ನು ವಿಸ್ತರಿಸಿರುವ ಬಗ್ಗೆ.

********

2015-16ನೇ ಸಾಲಿನಲ್ಲಿ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಥಮ ಪಿಯುಸಿ ತರಗತಿಗಳಿಗೆ ವಿದ್ಯಾರ್ಥಿಗಳನ್ನು ದಾಖಲಿಸಿಕೊಳ್ಳಲು **ದಿನಾಂಕ: 31-07-2015** ರವರೆಗೆ ಅಂತಿಮವಾಗಿ ಈ ಕೆಳಕಂಡ ಷರತ್ತುಗಳೊಂದಿಗೆ ವಿಸ್ತರಿಸಲಾಗಿದೆ. ದಾಖಲಾತಿಗೆ ನಿಗಧಿಪಡಿಸಿರುವ ಶುಲ್ಕಗಳೊಂದಿಗೆ, ವಿದ್ಯಾರ್ಥಿಗಳಿಂದ ಅವರ ಹಾಜರಾತಿಯನ್ನು ಶೇ75% ಕಾಯ್ದಿರಿಸಿಕೊಳ್ಳುವ ಕುರಿತು ಮುಚ್ಚಳಿಕೆಯನ್ನು ಪಡೆದುಕೊಂಡು ನಂತರವೇ ಕಾಲೇಜಿನ ಪ್ರಾಂಶುಪಾಲರು ಈ ಕೆಳಕಂಡ ದಂಡಶುಲ್ಕ ಪಡೆದು ನಿಯಮಾನುಸಾರ ದಾಖಲಾತಿಯನ್ನು ಮಾಡಿಕೊಳ್ಳುವುದು. ಸದರಿ ವಿದ್ಯಾರ್ಥಿಗಳಿಗೆ ಹೆಚ್ಚುವರಿ ವಿಶೇಷ ತರಗತಿಗಳನ್ನು ತೆಗೆದುಕೊಳ್ಳುವ ಮೂಲಕ ಹಾಜರಾಗದಿರುವ ಅವಧಿಯ ಪಾಠಪ್ರವಚನಗಳನ್ನು ಸರಿದೂಗಿಸಲು ಸೂಕ್ತ ಕ್ರಮ ಕೈಗೊಳ್ಳಲು ಪ್ರಾಂಶುಪಾಲರಿಗೆ ಸೂಚಿಸಿದೆ.

| |
|---|
| ಪ್ರಥಮ ಪಿಯುಸಿಗೆ ದಾಖಲಾಗಲು ವಿದ್ಯಾರ್ಥಿಗಳಿಗೆ ಕೊನೆಯ ದಿನಾಂಕ : 31-07-2015 |
| ನಿಯಮಾನುಸಾರ ನಿಗಧಿಪಡಿಸಿರುವ ಶುಲ್ಕದೊಂದಿಗೆ ದಂಡ ಶುಲ್ಕ ರೂ504+ ವಿಶೇಷ ದಂಡ ಶುಲ್ಕ ರೂ 1680 ಒಟ್ಟು ದಂಡಶುಲ್ಕ ರೂ 2184 (ನಿಯಮಾನುಸಾರ ಶುಲ್ಕ+ ಒಟ್ಟು ದಂಡ ಶುಲ್ಕ). |

For ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:

1. ನಿರ್ದೇಶಕರ ಆಪ್ತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ಮಾಹಿತಿಗಾಗಿ
2. ಇ-ಆಡಳಿತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ವೆಬ್‌ಸೈಟ್‌ನಲ್ಲಿ ಅಳವಡಿಸಲು ಮುಂದಿನ ಕ್ರಮಕ್ಕಾಗಿ.
3. ಕಛೇರಿ ಪ್ರತಿ